(A)

**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/07/ಎಂಎಸ್‌ಸಿ/2020 /544

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ತಾಂತ್ರಿಕ ಶಿಕ್ಷಣ ಭವನ
ಅರಮನೆ ರಸ್ತೆ, ಬೆಂಗಳೂರು–01,
ದಿನಾಂಕ:30.10.2020

## ಸುತ್ತೋಲೆ

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು, ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮುಖಾಂತರ ನೇಮಕಾತಿಯಾದ ಡಿ–ಗ್ರೂಪ್ ಸಿಬ್ಬಂದಿಗಳ ಹಾಜರಾತಿ ವಹಿ ನಿರ್ವಹಿಸುವ ಬಗ್ಗೆ.

ಉಲ್ಲೇಖ: ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ 42 ಇಎಸ್‌ಟಿ(3) 2017, ದಿ:10.08.2018

*–*–*–*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್‌ಗಳು/ಇಂಜಿನಿಯರಿಂಗ್ ಕಾಲೇಜುಗಳು/ಕಿರಿಯ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಕಛೇರಿಯ ಹಾಗೂ ಕಾರ್ಯಗಾರದಲ್ಲಿನ ಗ್ರೂಪ್ ಡಿ ಹುದ್ದೆಗಳಿಗೆ ಹೊರ ಗುತ್ತಿಗೆ ಮೇರೆಗೆ, ಸೇವೆ ಒದಗಿಸಲು ಮೆ! ಆಬ್ಜೆಕ್ಟ್ ಟೆಕ್ನಾಲಜೀಸ್, ಬೆಂಗಳೂರು, ಮತ್ತು ಮೆ! ಮಾತಾ ಟೆಕ್ನಾಲಜೀಸ್, ದಾರವಾಡ, ಈ 02 ಸಂಸ್ಥೆಗಳಿಗೆ ಅನುಮೋದನೆ ನೀಡಲಾಗಿದೆ. ಅದರಂತೆ ತಮ್ಮ ಸಂಸ್ಥೆಗಳ ಹೊರ ಗುತ್ತಿಗೆ ಮೇರೆಗೆ ಸಿಬ್ಬಂದಿಯನ್ನು ಒದಗಿಸಲು ನೀಡಿರುವ ಆಧಾರದಲ್ಲಿ ನೀಡಿರುವ ನಿಬಂಧನೆ ಮತ್ತು ಷರತ್ತುಗಳಲ್ಲಿನ ಕ್ರಮ ಸಂ. 3 ರಂತೆ, ಸಂಸ್ಥೆಯ ಸಿಬ್ಬಂದಿಗಳ ಹಾಜರಾತಿ ವಹಿಯನ್ನು ಪ್ರತ್ಯೇಕವಾಗಿ ನಿರ್ವಹಿಸಲು ತಿಳಿಸಲಾಗಿದೆ. ಆದಾಗ್ಯೂ ಹಲವಾರು ಸಂಸ್ಥೆಗಳು ಸಲ್ಲಿಸಲಾಗುತ್ತಿರುವ ಹಾಜರಾತಿ ಪತ್ರಗಳಲ್ಲಿ ಮುಖಪುಟದಲ್ಲಿ ನಮೂದಿಸಿರುವ ಹಾಜರಾದ ದಿನಗಳು ಮತ್ತು ಹಾಜರಾತಿ ವಹಿಯಲ್ಲಿ ನಮೂದಿಸಿರುವ ಕರ್ತವ್ಯಕ್ಕೆ ಹಾಜರಾದ ದಿನಗಳಿಗೆ ಹೊಂದಾಣಿಕೆಯಾಗದೆ ವೇತನ ಪಾವತಿಯ ಬಿಲ್‌ಗಳಲ್ಲಿ ಗೊಂದಲ ಉಂಟಾಗುತ್ತಿದೆ. ಆದ್ದರಿಂದ ಇನ್ನು ಮುಂದೆ ಈ ರೀತಿ ವ್ಯತ್ಯಾಸ ಉಂಟಾಗದಂತೆ ಸರಿಪಡಿಸಿ, ಹಾಜರಾತಿಗಳನ್ನು ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

೧) ತಾಂತ್ರಿಕ ಶಿಕ್ಷಣ ಇಲಾಖೆಯ ಅದೀನದಲ್ಲಿನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳು/ಕಿರಿಯ ತಾಂತ್ರಿಕ ಸಂಸ್ಥೆಗಳ ಪ್ರಾಂಶುಪಾಲರುಗಳ ಮುಂದಿನ ಸೂಕ್ತ ಕ್ರಮಕ್ಕಾಗಿ.

೨) ಇ– ಆಡಳಿತ